ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ-563 103

ಸಂಖ್ಯೆ : ಬೆಂಉ.ವಿ/ಶಿ.ಇಡಿ/ಸಂಯೋಜನೆ/158/ 2023-24 ದಿನಾಂಕ: 25.09.2023

**ಅಧಿಸೂಚನೆ**

ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಶ್ರೀ ಕೆ.ವೆಂಕಟಪತೆಪ್ಪ ಶಿಕ್ಷಣ ಕಾಲೇಜುಗೆ ಶಾಶ್ವತ ಸಂಯೋಜನೆ ನವೀಕರಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 444 ಯುಬಿವಿ 2022 ಬೆಂಗಳೂರು, ದಿನಾಂಕ: 21.04.2023

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 15.09.2023

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು 2023-24ನೇ ಶೈಕ್ಷಣಿಕ ಸಾಲಿಗೆ ಶ್ರೀ ಕೆ. ವೆಂಕಟಪತೆಪ್ಪ ಶಿಕ್ಷಣ ಕಾಲೇಜು ಸಿ.ವಿ.ವಿ ಕ್ಯಾಂಪಸ್ ಚಿಕ್ಕಬಳ್ಳಾಪುರ 562101 ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಶಾಶ್ವತ ಸಂಯೋಜನೆಯನ್ನು 2022-23ನೇ ಶೈಕ್ಷಣಿಕ ವರ್ಷಕ್ಕೆ ಮಂಜೂರು ಮಾಡಲಾಗಿದ್ದು, 2022-23ನೇ ಸಾಲಿಗೆ ಶಾಶ್ವತ ಸಂಯೋಜನೆಯನ್ನು ನವೀಕರಿಸಲಾಗಿದೆ.

| ಕ್ರಮ ಸಂಖ್ಯೆ | ಕಾಲೇಜಿನ ಹೆಸರು ಮತ್ತು ವಿಳಾಸ | ಕೋರ್ಸ್ | ವಿದ್ಯಾರ್ಥಿ ಪ್ರಮಾಣ |
|---|---|---|---|
| **01** | **ವಿಶ್ವವಿದ್ಯಾಲಯದ ಪರಿನಿಯಮಾವಳಿಗಂತೆ** | **ಬಿ.ಇಡಿ** | **100** |

ವಿ.ಸೂ: ಸರ್ಕಾರದ ಉಲ್ಲೇಖದನ್ವಯ (2022-23 ರಿಂದ 2026-2027ರ ವರ್ಷದ ವರೆಗೂ ಶಾಶ್ವತ ಸಂಯೋಜನೆ ಹೊಂದಿರುತ್ತದೆ.)

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರುತ್ತಗಳನ್ನು ಪಾಲಿಸತಕ್ಕದ್ದು.
2. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
3. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
4. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು ವಿಶ್ವದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
6. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೆ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ(ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.
7. ವೈಶಾಕ v/s ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13-08-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಭೋಧಕ/ಭೋಧಕೇತರ/ ಆಡಳಿತ ಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ /ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯಾದ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು

ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

8. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟಕ್ಕೆ ಕಾಲೇಜು ಕೋರ್ಸುಗಳು ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
9. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ. ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.
10. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ ಸೆಮಿಸ್ಟರ್ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿ
11. ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುಲ್ಲ.
12. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
13. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.
14. 2023–24ನೇ ಸಾಲಿಗೆ ಕೋಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.
15. **ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳ ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.**
16. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.
17. 2024–25ನೇ ಶೈಕ್ಷಣಕ ಸಾಲಿನ ಸಂಯೋಜನಾ ಶುಲ್ಕ ಬಾಕಿ ಇರುವ ಮೊತ್ತವನ್ನು ವಿತ್ತಾಧಿಕಾರಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಇವರಿಗೆ ಪಾವತಿಸತಕ್ಕದ್ದು, ಇಲ್ಲವಾದಲ್ಲಿ ಅಂತಹ ಕಾಲೇಜುಗಳ ಮುಂದಿನ ಕಾರ್ಯಚಟುವಟಿಕೆಗಳನ್ನು ತಡೆಹಿಡಿಯಲಾಗುವುದು.
18. ಪ್ರತಿ ಕಾಲೇಜು ಆಯಾ ಶೈಕ್ಷಣಿಕ ವರ್ಷದಲ್ಲಿ ಕನಿಷ್ಠ ಎರಡು ಆಡಳಿತ ಮಂಡಳಿ (Governing Council) ಸಭೆಗಳನ್ನು ಕಡ್ಡಾಯವಾಗಿ ನಡೆಸಿ ವರದಿಯನ್ನು ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು

ಆದೇಶಾನುಸಾರ

ಕುಲಸಚಿವರು

**ಕುಲಸಚಿವರು**
**ಬೆಂಗಳೂರು ಉತ್ತರ ವಿಶ್ವವಿದ್ಯಾಲಯ**
**ಟಮಕ, ಕೋಲಾರ, ಕರ್ನಾಟಕ–563 103.**

ಗೆ,

ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಗೆ,

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು – 560 001
2. ನಿರ್ದೇಶಕರು, ಕಾಲೇಜು ಶಿಕ್ಷಣ ಆಯುಕ್ತರು, ಬೆಂಗಳೂರು – 560 001.
3. ಕುಲಸಚಿವರು (ಮೌ), ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ– 563 103.
4. ಅಧ್ಯಕ್ಷರು ಎನ್.ಸಿ.ಟಿ.ಇ., ಎಸ್.ಆರ್.ಸಿ.ಎಫ್., ನ್ಯಾಷನಲ್ ಲಾ ಸ್ಕೂಲ್ ಎದುರು, ನಾಗರಭಾವಿ ಬೆಂಗಳೂರು– 560 072.

5. ಪ್ರಾದೇಶಿಕ ನಿರ್ದೇಶಕರು, ಎನ್.ಸಿ.ಟಿ.ಇ., ಎಸ್.ಆರ್.ಸಿ.ಎಫ್., ನ್ಯಾಷನಲ್ ಲಾ ಸ್ಕೂಲ್ ಎದುರು, ನಾಗರಭಾವಿ ಬೆಂಗಳೂರು– 560 072.
6. ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶಕರು, 100 ಅಡಿ ರಿಂಗ್ ರಸ್ತೆ, ಬನಶಂಕರಿ 3ನೇ ಹಂತ ಬೆಂಗಳೂರು – 560 085.
7. ವಿಶೇಷಾಧಿಕಾರಿಗಳು, ಕೇಂದ್ರೀಕೃತ ಪ್ರವೇಶ ಘಟಕ, ಕಾವೇರಿ ಭವನದ ಎದುರು, ಬೆಂಗಳೂರು – 560 009.
8. ಉಪಕುಲಸಚಿವರು; ಅಧೀಕ್ಷಕರು; ಶೈಕ್ಷಣಿಕ ವಿಭಾಗ – 1/ 4 ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ–563 103.
9. ಸಮನ್ವಯಾಧಿಕಾರಿಗಳು, ಅಂಕಿ ಅಂಶಗಳ ವಿಭಾಗ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ– 563 103.
10. ಕಛೇರಿ ಪ್ರತಿ.